**Bangalore**
**Regional News**
**19.11.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಅರ್ಹರ ಬಿಪಿಎಲ್ ಕಾರ್ಡ್ ರದ್ದು ಮಾಡದಂತೆ ಆಹಾರ ಸಚಿವ ಮುನಿಯಪ್ಪ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಮುಖ್ಯಮಂತ್ರಿ ಜೊತೆಗಿನ ಸಭೆ ಯಶಸ್ವಿ ; ಮುಷ್ಕರ ಹಿಂಪಡೆದ ಮದ್ಯ ಮಾರಾಟಗಾರರು

೩. ಡಿಸೆಂಬರ್ ೯ ರಿಂದ ೨೦ರವರೆಗೆ ಬೆಳಗಾವಿಯಲ್ಲಿ ವಿಧಾನಮಂಡಲದ ಚಳಿಗಾಲದ ಅಧಿವೇಶನ

೪. ವಕ್ಫ್ ವಿವಾದ ಖಂಡಿಸಿ ಚಿಕ್ಕಬಳ್ಳಾಪುರದಲ್ಲಿ ಬಿಜೆಪಿ ಪ್ರತಿಭಟನೆ

೫. ವಿಶ್ವ ಶೌಚಾಲಯ ದಿನಾಚರಣೆ ; ರಾಜ್ಯದೆಲ್ಲೆಡೆ ಇಂದಿನಿಂದ ವಿಶೇಷ ಆಂದೋಲನ

**<><*<><>*><>**

ಮಾಜಿ ಪ್ರಧಾನಿ ಇಂದಿರಾಗಾಂಧಿಯವರು ಬ್ಯಾಂಕ್‌ಗಳನ್ನು ರಾಷ್ಟ್ರೀಕರಣ ಮಾಡಿದ್ದರಿಂದಲೇ ಬಡವರಿಗೂ ಬ್ಯಾಂಕ್‌ಗಳ ಬಾಗಿಲು ತೆರೆಯಿತು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಕೆಪಿಸಿಸಿ ಕಚೇರಿಯಲ್ಲಿ ಆಯೋಜಿಸಿದ್ದ ಇಂದಿರಾಗಾಂಧಿ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿರಾಗಾಂಧಿಯವರ ಹೋರಾಟ, ಬದುಕು ನಮ್ಮೆಲ್ಲರಿಗೂ ಆದರ್ಶ ಎಂದು ಹೇಳಿದ್ದಾರೆ. ಅವರ ಭೂಸುಧಾರಣಾ ಕಾಯ್ದೆ, ಗರೀಬಿ ಹಟಾವೊ ಕಾರ್ಯಕ್ರಮ, ಬ್ಯಾಂಕ್‌ಗಳ ರಾಷ್ಟ್ರೀಯಕರಣ ಮುಂತಾದವುಗಳ ಫಲ ಬಡವರಿಗೂ ದೊರಕಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಯಾವುದೇ ಕಾರಣಕ್ಕೂ ಅರ್ಹರಿಗೆ ಬಿಪಿಎಲ್ ಕಾರ್ಡ್ ತಪ್ಪಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ಅವರಿಗೆ ಸೂಚಿಸಿದ್ದಾರೆ. ಬಡತನ ರೇಖೆಗಿಂತ ಕೆಳಗಿನವರಿದ್ದರೆ ಅರ್ಜಿ ಸಲ್ಲಿಸುವಂತೆ ತಿಳಿಸಿದ್ದಾರೆ. ಬಿಪಿಎಲ್‌ಗೆ ಅರ್ಹರಲ್ಲದವರು ಎಪಿಎಲ್ ಕಾರ್ಡ್‌ಗೆ ಅರ್ಜಿ ಸಲ್ಲಿಸುವಂತೆ ಹೇಳಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ

**<><*<><>*><>**

ಬೆಂಗಳೂರು ನಾವೀನ್ಯತೆ ಮತ್ತು ಸಂಶೋಧನೆಗೆ ಜಾಗತಿಕ ಕೇಂದ್ರವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಏಷ್ಯಾದ ಅತಿದೊಡ್ಡ ತಂತ್ರಜ್ಞಾನ ಶೃಂಗ - ಬೆಂಗಳೂರು ಟೆಕ್ ಶೃಂಗ ೨೦೨೪ಕ್ಕೆ ಬೆಂಗಳೂರಿನಲ್ಲಿಂದು ಚಾಲನೆ ನೀಡಿ ಮಾತನಾಡಿದ ಅವರು, ಭಾರತದ ಮೊದಲ ಜಾಗತಿಕ ಸಾಮರ್ಥ್ಯ ಕೇಂದ್ರ ನೀತಿಯನ್ನು ಕರ್ನಾಟಕ ಜಾರಿಗೆ ತಂದಿದ್ದು, ಇದರ ಮುಂದುವರೆದ ಭಾಗವಾಗಿ ಬೆಂಗಳೂರು, ಮೈಸೂರು ಹಾಗೂ ಬೆಳಗಾವಿಯಲ್ಲಿ ಮೂರು ಜಾಗತಿಕ ನಾವೀನ್ಯತಾ ಜಿಲ್ಲೆಗಳನ್ನು ಸ್ಥಾಪಿಸಲಾಗುವುದು ಎಂದು ಘೋಷಿಸಿದರು. ರಾಜ್ಯದಲ್ಲಿ ಜಾಗತಿಕ ಸಾಮರ್ಥ್ಯ ಕೇಂದ್ರಗಳನ್ನು ಸ್ಥಾಪಿಸಲು ಈ ಪಾರ್ಕ್‌ಗಳು ಮೀಸಲಾಗಿದೆ. ಇಂಜಿನಿಯರಿಂಗ್ ಪ್ರತಿಭೆಗಳು ಮತ್ತು ಜಾಗತಿಕವಾಗಿ

ಅತ್ಯಧಿಕ ಎ ಐ ವೃತ್ತಿಪರರನ್ನು ಹೊಂದಿರುವ ಕರ್ನಾಟಕದಲ್ಲಿ ಪೂರಕ ವಾತಾವರಣವಿರಲಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರ್ನಾಟಕ ದೇಶದ ತಂತ್ರಜ್ಞಾನ ವಲಯದ ಹೃದಯ ಬಡಿತ ಎಂದು ಹೇಳಿದರು.

**<><*<><>*><>**

ಮದಮಾರಾಟಗಾರರು ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆಗೆ ಬೆಂಗಳೂರಿನಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ನಡೆಸಿದ ಸಭೆ ಯಶಸ್ವಿಯಾಗಿದ್ದು, ಮುಷ್ಕರ ವಾಪಸ್ ಪಡೆಯಲಾಗಿದೆ. ಮದ್ಯ ಮಾರಾಟಗಾರರ ಬೇಡಿಕೆ ಬಗ್ಗೆ ಸಹಾನುಭೂತಿಯಿಂದ ಪರಿಶೀಲಿಸುವುದು ಹಾಗೂ ಮದ ಮಾರಾಟಗಾರರಿಗೆ ವ್ಯಾಪಾರ ಹೆಚ್ಚಾಗಿ ಸರ್ಕಾರಕ್ಕೆ ಆದಾಯ ತರುವಂತೆ ಮಾಡಲಾಗುವುದು ಎಂದು ಮುಖ್ಯಮಂತ್ರಿ ಭರವಸೆ ನೀಡಿದ್ದಾರೆ. ಮದ್ಯ ಮಾರಾಟಗಾರರಿಗೆ ಕಿರುಕುಳ ನೀಡದಂತೆ ಅಬಕಾರಿ ಆಯುಕ್ತರಿಗೆ ಸೂಚನೆ ನೀಡಲಾಗುವುದು ಎಂದು ಸರ್ಕಾರ ಭರವಸೆ ನೀಡಿದೆ. ಕಿರುಕುಳ ನೀಡುವ ಅಧಿಕಾರಿಗಳ ವಿರುದ್ಧ ಮುಲಾಜಿಲ್ಲದೇ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದ್ದಾರೆ.

**<><*<><>*><>**

ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ಡಿಸೆಂಬರ್ ೯ ರಿಂದ ಡಿಸೆಂಬರ್ ೨೦ರವರೆಗೆ ಚಳಿಗಾಲದ ಅಧಿವೇಶನ ನಡೆಯಲಿದೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ಡಿಸೆಂಬರ್ ೯ ರಿಂದ ಅಧಿವೇಶನ ಪ್ರಾರಂಭವಾಗಲಿದ್ದು, ಎಲ್ಲರೂ ಕಡ್ಡಾಯವಾಗಿ ಹಾಜರಿರುವಂತೆ ಸೂಚಿಸಿದ್ದಾರೆ. ವಕ್ಫ್ ವಿಚಾರ, ಮುಡಾ ಪ್ರಕರಣದಲ್ಲಿ ಸಚಿವರು ಸಮರ್ಪಕವಾಗಿ ಉತ್ತರ ನೀಡುವಂತೆ ತಿಳಿಸಿದ್ದಾರೆ.

**<><*<><>*><>**

ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರ ಮತ ಬ್ಯಾಂಕ್ ಓಲೈಕೆಗಾಗಿ ರೈತರು, ಮತ ಮಂದಿರಗಳ ಭೂಮಿ ಕಬಳಿಸುತ್ತಿರುವುದನ್ನು ಕೂಡಲೇ ನಿಲ್ಲಿಸಬೇಕೆಂದು ಬಿಜೆಪಿ ಆಗ್ರಹಿಸಿದೆ. ಚಿಕ್ಕಬಳ್ಳಾಪುರ ನಗರದ ಶಿಡ್ಲಘಟ್ಟ ವೃತ್ತದಲ್ಲಿ ಇಂದು ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ವಕ್ಫ್ ಮಂಡಳಿ ಭಾರತ ರತ್ನ ಸರ್. ಎಂ. ವಿಶ್ವೇಶ್ವರಯ್ಯರವರು ಓದಿದ ಶಾಲೆ ದೇವಾಲಯವನ್ನು ಪರಭಾರೆ ಮಾಡಲು ಹೊರಟಿದೆ ಎಂದು ಆರ್. ಅಶೋಕ ದೂರಿದ್ದಾರೆ.ಸಂಸದ ಡಾ.ಕೆ.ಸುಧಾಕರ್ ಮಾತನಾಡಿ, ಅಲ್ಪಸಂಖ್ಯಾತರನ್ನು ಓಲೈಸಲು ಸರ್ಕಾರ ಹಿಂದೂಗಳ ಭೂಮಿಯನ್ನು ಕಬಳಿಸುತ್ತಿದೆ ಎಂದು ಆರೋಪಿಸಿದರು.

**<><*<><>*><>**

ವಕ್ಫ್ ವಿವಾದ ಹಿನ್ನೆಲೆಯಲ್ಲಿ ಇದೇ ೨೧-೨೨ ರಂದು ರಾಜ್ಯಾದ್ಯಂತ ಪ್ರತಿಭಟನೆ ನಡೆಸಲು ಬಿಜೆಪಿ ನಿರ್ಧರಿಸಿದೆ.  ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ಉಪಮುಖ್ಯಮಂತ್ರಿ ಸಿ.ಎನ್. ಅಶ್ವತ್ಥನಾರಾಯಣ್, ಬೆಂಗಳೂರಿನ ಫ್ರೀಡಂಪಾರ್ಕ್ ಹಾಗೂ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ್ ಕಚೇರಿ ಎದುರು ನಮ್ಮ ಭೂಮಿ ನಮ್ಮ ಹಕ್ಕು ಘೋಷಣೆ ಅಡಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಸಂತ್ರಸ್ತ ವ್ಯಕ್ತಿಗಳಿಂದ ಅಂದು ಮನವಿ ಸ್ವೀಕರಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಧರ್ಮದ ಹೆಸರಿನಲ್ಲಿ ದ್ವೇಷ ಹರಡಲು ಸಂವಿಧಾನದಲ್ಲಿ ಅವಕಾಶವಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ತಿಳಿಸಿದ್ದಾರೆ. ಮೈಸೂರಿನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಮುಸ್ಲಿಂ ನೌಕರರ ಕ್ಷೇಮಾಭಿವೃದ್ಧಿ ಸಂಘ ಆಯೋಜಿಸಿದ್ದ ಶೈಕ್ಷಣಿಕ ಕಾರ್ಯಾಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಾವೆಲ್ಲರೂ ಭಾರತೀಯರು ಎಂಬ ಮನೋಭಾವ ಪ್ರತಿಯೊಬ್ಬರಲ್ಲಿ ಮೂಡಬೇಕು ಎಂದು ಕರೆ ನೀಡಿದರು. ಸಂವಿಧಾನವನ್ನು ರಕ್ಷಿಸುವ ಹೊಣೆಗಾರಿಕೆ ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು.

<><*<><>*><>

ವಿಶ್ವ ಶೌಚಾಲಯ ಮತ್ತು ವಿಶ್ವ ಮಾನವ ಹಕ್ಕುಗಳ ದಿನಾಚರಣೆಗಳ ಪ್ರಯುಕ್ತ ಪ್ರಸ್ತುತ ವರ್ಷ 'ನಮ್ಮ ಶೌಚಾಲಯ ನಮ್ಮ ಗೌರವ" ಎಂಬ ಶೀರ್ಷಿಕೆ ಹಾಗೂ "ಅಂದದ ಶೌಚಾಲಯ ಆನಂದದ ಜೀವನ ಎಂಬ ಘೋಷ ವಾಕ್ಯದೊಂದಿಗೆ ಪ್ರಾರಂಭಗೊಂಡಿದೆ. ಡಿಸೆಂಬರ್ ೧೦ ರವರೆಗೆ ಗದಗ ಜಿಲ್ಲೆಯಾದ್ಯಂತ ವಿಶೇಷ ಆಂದೋಲನ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಭರತ .ಎಸ್ ತಿಳಿಸಿದ್ದಾರೆ. ವಿಶ್ವ ಶೌಚಾಲಯ ದಿನಾಚರಣೆ-೨೦೨೪ರ ಅಂಗವಾಗಿ ಆಯೋಜಿಸಲಾಗಿರುವ ನಮ್ಮ ಶೌಚಾಲಯ ನಮ್ಮ ಗೌರವ ಆಂದೋಲನಕ್ಕೆ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಪಾಂಡ್ವೆ ಪೋಸ್ಟರ್ ಬಿಡುಗಡೆ ಮೂಲಕ ಚಾಲನೆ ನೀಡಿದರು. ಮೈಸೂರು ಜಿಲ್ಲೆಯಲ್ಲಿ ಶೌಚಾಲಯಗಳ ನಿರ್ಮಾಣದ ಜತೆಗೆ ಅದನ್ನು ಬಳಸುವಂತೆ ಅರಿವು ಮೂಡಿಸುವುದು ಸವಾಲಿನ ಸಂಗತಿಯಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿಇಒ ಕೆ.ಎಂ. ಗಾಯತ್ರಿ ತಿಳಿಸಿದ್ದಾರೆ. ಗ್ರಾಮೀಣ ಸಮುದಾಯದಲ್ಲಿ ಸುರಕ್ಷಿತ ನೈರ್ಮಲ್ಯ, ಶುಚಿತ್ವ ಕುರಿತು ಅರಿವು ಮೂಡಿಸುವ ಜೊತೆಗೆ  ನಮ್ಮ ಶೌಚಾಲಯ-ನಮ್ಮ ಗೌರವ ಘೋಷ ವಾಕ್ಯದೊಂದಿಗೆ ಯಾದಗಿರಿ ಜಿಲ್ಲೆಯಾದ್ಯಂತ ಜಾಗೃತಿ ಆಂದೋಲನ ಯಶಸ್ವಿಯಾಗಿ ಹಮ್ಮಿಕೊಳ್ಳಲು ಯಾದಗಿರಿ ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ  ಜಿಲ್ಲಾಡಳಿತ, ವತಿಯಿಂದ ದೇವನಹಳ್ಳಿ ತಾಲೂಕಿನ ಕುಂದಾಣ ಗ್ರಾಮದಲ್ಲಿ ವಿಶ್ವ ಶೌಚಾಲಯ ದಿನವನ್ನು ಆಚರಿಸಲಾಯಿತು.

<><*<><>*><>

ಮುಂದಿನ ತಿಂಗಳು ಮಂಡ್ಯದಲ್ಲಿ ನಡೆಯಲಿರುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆ ನಿರ್ಮಾಣದ ಕೆಲಸಕ್ಕೆ ಇದೇ ೨೨ ರಂದು ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಶಾಸಕ ಪಿ.ಎಂ. ನರೇಂದ್ರಸ್ವಾಮಿ ತಿಳಿಸಿದ್ದಾರೆ. ಮಂಡ್ಯದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ವೇದಿಕೆ ಸಮಿತಿಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲಾ ಸಮಿತಿಗಳ ಕೆಲಸಕ್ಕಿಂತ ವೇದಿಕೆ ಸಮಿತಿಯ ಕೆಲಸ ಮುಖ್ಯವಾಗಿರುತ್ತದೆ. ಹೀಗಾಗಿ ಮುಖ್ಯ ವೇದಿಕೆ ಹಾಗೂ ಎರಡು ಸಮಾನಾಂತರ ವೇದಿಕೆಗಳಿಗೆ ಮೂರು ಜವಾಬ್ದಾರಿಯುತ ಅಧಿಕಾರಿಗಳನ್ನು ನಿಯೋಜಿಸುವಂತೆ ಸೂಚಿಸಿದ್ದಾರೆ.

**<><*<><>*><>**

ಬೆಂಗಳೂರಿನ ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಅಪೂರ್ಣ ಕಾಮಗಾರಿಗಳ ವರದಿ ಸಿದ್ಧಪಡಿಸಲು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. "ಆಯುಕ್ತರ ನಡೆ ವಲಯದ ಕಡೆ" ಕಾರ್ಯಕ್ರಮದಡಿ ಸಾರ್ವಜನಿಕರ ಅಹವಾಲು ಸ್ವೀಕಾರದ ವೇಳೆ ಮಾತನಾಡಿದ ಅವರು, ವಲಯ ವ್ಯಾಪ್ತಿಯಲ್ಲಿ ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಿರುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ. ಬೊಮ್ಮನಹಳ್ಳಿ ವಲಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕೆರೆಗಳಿಗೆ ಭದ್ರತಾ ಸಿಬ್ಬಂದಿ ನಿಯೋಜನೆ ಮಾಡಬೇಕು. ಗಸ್ತು ತಿರುಗುವ ವೇಳೆ ಕಸ ಬಿಸಾಡುವ ಹಾಗೂ ಬೀದಿ ದೀಪಗಳ ಅಳವಡಿಕೆಯ ಮೇಲೆಯೂ ನಿಗಾವಹಿಸಲು ಮಾರ್ಷಲ್ ಮೇಲ್ವಿಚಾರಕರಿಗೆ ಸೂಚಿಸಿದ್ದಾರೆ.

**<><*<><>*><>**

<u>ಸಂಕ್ಷಿಪ್ತ ಸುದ್ದಿಗಳು</u>

೧. ಕರ್ನಾಟಕದ ಜನಪದ ಪರಿಷತ್ತು ಪ್ರತಿ ವರ್ಷ ನೀಡುವ ನಾಡೋಜ ಎಚ್‌ಎಲ್ ನಾಗೇಗೌಡ ರಾಷ್ಟ್ರೀಯ ಪ್ರಶಸ್ತಿಗೆ ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನ ಹೊಸೂರಿನ ಕಿನ್ನರಿ ಜೋಗಿ ಕಲಾವಿದ ಕೆ. ಗುಡ್ಡಪ್ಪ ಆಯ್ಕೆಯಾಗಿದ್ದಾರೆ.

೨. ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮದಿಂದ ಇಂದು ಒಂದು ಕೋಟಿ ೮ ಲಕ್ಷ ರೂಪಾಯಿ ಲಾಭಾಂಶದ ಚೆಕ್ಕನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ವೀಕರಿಸಿದರು.

೩. ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವು ವಿಶ್ರಾಂತ ಕುಲಪತಿ ಹಾಗೂ ವಿಜ್ಞಾನಿ ಡಾ.ಎಸ್.ಬಿ.ದಂಡಿನ್ ಹೆಸರಿನಲ್ಲಿ ನೀಡುವ ೨೦೨೪-೨೫ನೇ ಸಾಲಿನ ಅತ್ಯುತ್ತಮ ವಿಸ್ತರಣಾ ವಿಜ್ಞಾನಿ ಪ್ರಶಸ್ತಿಗೆ ಕೋಲಾರದ ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಹಾಗೂ ಸಹ ಪ್ರಾಧ್ಯಾಪಕರಾದ ಡಾ.ಅನಿಲ್ ಕುಮಾರ್.ಎಸ್. ಆಯ್ಕೆಯಾಗಿದ್ದಾರೆ.

೪. ಗದಗ ಜಿಲ್ಲಾ ಸಹಕಾರ ಒಕ್ಕೂಟದ ವತಿಯಿಂದ ಜಿಲ್ಲೆಯ ಕೊಣ್ಣೂರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ೭೧ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮ ಜರುಗಿತು.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಈಶಾನ್ಯ ಮುಂಗಾರು ದುರ್ಬಲವಾಗಿತ್ತು. ಕರಾವಳಿಯ ಪ್ರತ್ಯೇಕ ಸ್ಥಳಗಳಲ್ಲಿ ಮಳೆಯಾಗಿದೆ.

ರಾಜ್ಯದಲ್ಲಿ ಗರಿಷ್ಠ ತಾಪಮಾನ ೩೫.೮ ಡಿಗ್ರಿ ಸೆಲ್ಸಿಯೆಸ್, ಕಾರವಾರದಲ್ಲಿ ಹಾಗೂ ಕನಿಷ್ಠ ತಾಪಮಾನ ೧೨.೫ ಡಿಗ್ರಿ ಸೆಲ್ಸಿಯೆಸ್ ಬೀದರ್‌ನಲ್ಲಿ ದಾಖಲಾಗಿದೆ. ಮುಂದಿನ ೬ ದಿನಗಳ ಕಾಲ ರಾಜ್ಯಾದ್ಯಂತ ಒಣಹವೆ ಇರುವ ಸಾಧ್ಯತೆಯಿದೆ.

ಬೆಂಗಳೂರು ಹಾಗೂ ಸುತ್ತಮುತ್ತ ಮೋಡ ಕವಿದ ವಾತಾವರಣವಿರಲಿದ್ದು, ಕೆಲವು ಕಡೆಗಳಲ್ಲಿ ಮುಂಜಾನೆ ಮಂಜು ಮುಸುಕಿದ ವಾತಾವರಣ ಸಾಧ್ಯತೆಯಿದೆ. ಗರಿಷ್ಠ ೨೮, ಕನಿಷ್ಠ ೧೯ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**